## 8. ಉತ್ತರ ಕರ್ನಾಟಕ: ಹಲವೆಡೆ ಭಾರಿ ಮಳೆ

ಕಲ್ಯಾಣ ಕರ್ನಾಟಕದ ಕಲಬುರ್ಗಿ ಜಿಲ್ಲೆ ಕಮಲಾಪುರ, ಆಳಂದ ತಾಲ್ಲೂಕುಗಳಲ್ಲಿ ಭಾರಿ ಮಳೆ ಸುರಿದಿದ್ದು, ಹಳ್ಳ–ನಾಲೆಗಳು ತುಂಬಿ ಹರಿಯುತ್ತಿವೆ. ಬಾಗಲಕೋಟೆ, ಬಳ್ಳಾರಿ, ವಿಜಯಪುರ, ಬೆಳಗಾವಿ ಜಿಲ್ಲೆಗಳಲ್ಲಿಯೂ ಉತ್ತಮ ಮಳೆ ಬಿದ್ದಿದೆ.

ಆಳಂದ ತಾಲ್ಲೂಕಿನ ಮಾದನ ಹಿಪ್ಪರಗ, ನಿಂಗದಳ್ಳಿ, ಪಡಸಾವಳಿ, ಜೀರಹಳ್ಳಿ, ಮಟಕಿ, ತೀರ್ಥ ಹಳ್ಳಿಗಳಿಗೆ ಪ್ರವಾಹ ಬಂದಿದ್ದರಿಂದ ಈ ಗ್ರಾಮಗಳ ಹಾಗೂ ಕಮಲಾಪುರ ತಾಲ್ಲೂಕಿನ ಏಳು ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ. ದಸ್ತಾಪುರ ಗ್ರಾಮ ನಡುಗಡ್ಡೆಯಾಗಿದೆ. ಸಾವಿರಾರು ಎಕರೆ ಬೆಳೆ ಹಾನಿಯಾಗಿದೆ.

ಆಳಂದ ತಾಲ್ಲೂಕಿನ ಹಡಲಗಿ ಸಮೀಪ ವ್ಯಾಪಕ ಮಳೆಯಾಗಿದೆ. ಭೀಮಾ ನದಿಯಲ್ಲಿ ನೀರಿನ ಹರಿವು ಹೆಚ್ಚಾಗಿದ್ದು, ಸೊನ್ನ ಬ್ಯಾರೇಜ್‌ನಿಂದ 15 ಸಾವಿರ ಕ್ಯುಸೆಕ್ ನೀರನ್ನು ನದಿಗೆ ಬಿಡಲಾಗುತ್ತಿದೆ. ಬೆಣ್ಣೆತೊರಾ ಜಲಾಶಯ ಭರ್ತಿಯಾಗಿದೆ. ಕಲಬುರ್ಗಿ ನಗರ, ಚಿಂಚೋಳಿ ಹಾಗೂ ಬೀದರ್ ಜಿಲ್ಲೆಯ ಭಾಲ್ಕಿ, ಔರಾದ್‌ಗಳಲ್ಲಿಯೂ ಸ್ವಲ್ಪ ಸುರಿದಿದೆ. ಯಾದಗಿರಿ ಸಮೀಪದ ನಾಯ್ಕಲ್ ಗ್ರಾಮದ ಅಂಬೇಡ್ಕರ್ ನಗರದಲ್ಲಿ ರಾತ್ರಿ ಮನೆ ಕುಸಿದಿದ್ದು, ಅದರಡಿ ಸಿಲುಕಿದ್ದ 8 ತಿಂಗಳ ಮಗು ಸೇರಿ ನಾಲ್ವರನ್ನು ನೆರೆಹೊರೆಯವರು ರಕ್ಷಿಸಿದ್ದಾರೆ.

ಹುಬ್ಬಳ್ಳಿ, ಬಾಗಲಕೋಟೆ, ಬಳ್ಳಾರಿ, ವಿಜಯಪುರ, ಬೆಳಗಾವಿ ಜಿಲ್ಲೆಗಳಲ್ಲಿ ಮಳೆಯಾಗಿದೆ. ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಗುಡೇಕೋಟೆ ಹೋಬಳಿಯಲ್ಲಿ ಭಾರಿ ಮಳೆ ಸುರಿದು ಮೆಕ್ಕೆಜೋಳ, ಈರುಳ್ಳಿ, ಜೋಳ, ಶೇಂಗಾ ಬೆಳೆ ಹಾನಿಯಾಗಿದ್ದು, ದಾಳಿಂಬೆ ಬೆಳೆ ಕೊಚ್ಚಿಕೊಂಡು ಹೋಗಿದೆ. ಮಳೆಯ ರಭಸಕ್ಕೆ ಸರ್ವೋದಯ, ಲಿಂಗನಹಳ್ಳಿ ತಾಂಡಾ, ಶ್ರೀಕಂಠಾಪುರ ತಾಂಡಾ, ಯರ್ರಬೊನಹಳ್ಳಿ, ಸಿಡೇಗಲ್ಲು ಸುತ್ತ ಮುತ್ತಲ ಪ್ರದೇಶಗಳಲ್ಲಿ ಹಳ್ಳಗಳು ತುಂಬಿ ಹರಿಯುತ್ತಿವೆ. ಹೊಲಗಳ ಒಡ್ಡುಗಳು ಕೊಚ್ಚಿಕೊಂಡು ಹೋಗಿವೆ.

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲ್ಲೂಕಿನ ಆಲಮಟ್ಟಿ, ನಿಡಗುಂದಿ, ಗೊಳಸಂಗಿ, ವಂದಾಲ, ಸೇರಿದಂತೆ ನಾನಾ ಕಡೆ ಜೋರು ಮಳೆ ಸುರಿದಿದೆ. ಚಿಕ್ಕೋಡಿಯಲ್ಲಿ ಹೆಚ್ಚು ಮಳೆಯಾಗಿದೆ. ಶಿವಮೊಗ್ಗ ಜಿಲ್ಲೆಯ ಹಲವೆಡೆ ಮಳೆ ಬಿಡುವು ನೀಡಿದೆ.

ಆಧಾರ:ಪ್ರಜಾವಾಣಿ, ದಿನಾಂಕ:25.07.2020